ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ: ಪಪೂಶಿಇ/ಶೈಶಾ/ರಾ.ಕಿ.ವಿ.ಸ./2019-20 ದಿನಾಂಕ: 5-12-2019

# ಸುತ್ತೋಲೆ

ವಿಷಯ: ಜನವರಿ 4 & 5, 2020ರಲ್ಲಿ ಜರುಗುವ 'ರಾಷ್ಟ್ರೀಯ ಕಿಶೋರ್ ವಿಜ್ಞಾನ ಸಮ್ಮೇಳನ'ದಲ್ಲಿ 18 ವರ್ಷಕ್ಕಿಂತ ಕಡಿಮೆ ವಯಸ್ಸುಳ್ಳ ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: ಡಾ॥ ಎಸ್. ರಾಜೇಂದ್ರ ಪ್ರಸಾದ್, ಉಪ ಕುಲಪತಿಗಳು ಹಾಗೂ ಅಧ್ಯಕ್ಷರು, 107ನೇ ಭಾರತೀಯ ವಿಜ್ಞಾನ ಕಾಂಗ್ರೆಸ್ (ಐಎಸ್‌ಸಿ), ಗಾಂಧೀ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು- ಇವರ ಪತ್ರ ಸಂಖ್ಯೆ: ವಿಸಿ/ಐಎಸ್‌ಸಿ/2019-20 ದಿನಾಂಕ: 06-11-2019 (ಸ್ವೀ: 12-11-2019)

***

ಭಾರತೀಯ ವಿಜ್ಞಾನ ಕಾಂಗ್ರೆಸ್ ಸಂಘ, ಕೋಲ್ಕತ್ತಾ ಇವರ ಸಹಯೋಗದೊಂದಿಗೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರಿಂದ **ಭಾರತೀಯ ವಿಜ್ಞಾನ ಕಾಂಗ್ರೆಸ್-2020ರ** ಭಾಗವಾಗಿ **"ರಾಷ್ಟ್ರೀಯ ಕಿಶೋರ್ ವಿಜ್ಞಾನ ಸಮ್ಮೇಳನ"**ವನ್ನು **ಜನವರಿ 4 & 5, 2020ರಲ್ಲಿ ಬೆಂಗಳೂರಿನ ಜಿಕೆವಿಕೆ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ** ಆಯೋಜಿಸಲಾಗಿರುತ್ತದೆ ಎಂದು, ಆಯ್ದ ಯೋಜನೆಗಳನ್ನು ವೀಕ್ಷಿಸಲು ಮತ್ತು ವಿದ್ಯಾರ್ಥಿ ಪ್ರತಿನಿಧಿಗಳೊಂದಿಗೆ ಸಂವಹನ ನಡೆಸಲು ಮಕ್ಕಳಿಗೆ ಅವಕಾಶವನ್ನು ಒದಗಿಸಲು ಉದ್ದೇಶಲಾಗಿದೆ ಎಂದು ತಿಳಿಸಲಾಗಿರುತ್ತದೆ. ದಿನಾಂಕ: 05-01-2020 ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಮಕ್ಕಳು ಪ್ರದರ್ಶನವನ್ನು ವೀಕ್ಷಿಸಲು ಸಮ್ಮೇಳನಕ್ಕೆ ಭೇಟಿ ನೀಡಲು ಆಹ್ವಾನಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಳಿಗಾಗಿ www.isc2020uasb.org ಅನ್ನು ಪರಾಮರ್ಶಿಸಲು ಸೂಚಿಸಲಾಗಿರುತ್ತದೆ. (ಸದರಿ ಸಮ್ಮೇಳನದ ಉದ್ದೇಶ, ಆಯೋಜನೆಯ ಸ್ಥಳ, ಸಂಪರ್ಕಿಸಬೇಕಾದ ಅಧಿಕಾರಿಗಳು ಸೇರಿದಂತೆ ಸಂಪೂರ್ಣ ಮಾಹಿತಿಗಳನ್ನು ಈ ಸುತ್ತೋಲೆಯೊಂದಿಗೆ ಅನುಬಂಧಿಸಿದೆ.)

ಈ ರಾಷ್ಟ್ರೀಯ ವಿಜ್ಞಾನ ಸಮ್ಮೇಳನದಲ್ಲಿ ಪ್ರತಿ ದಿನ 1000 ವಿದ್ಯಾರ್ಥಿಗಳು ಭಾಗವಹಿಸಲು ಅವಕಾಶ ಮಾಡಿಕೊಡಬೇಕಾಗಿ ಹಾಗೂ ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳ ವಿದ್ಯಾರ್ಥಿಗಳು ಸದರಿ ಸಮ್ಮೇಳನದಲ್ಲಿ ವಿದ್ಯಾರ್ಥಿ ಪ್ರತಿನಿಧಿಗಳಾಗಿ ಭಾಗವಹಿಸಲು ಅವಕಾಶ ಮಾಡಿಕೊಡಬೇಕಾಗಿ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರುಗಳು ತಮ್ಮ ವ್ಯಾಪ್ತಿಯ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸುತ್ತೋಲೆಯನ್ನು ಮಾಹಿತಿಗಳೊಂದಿಗೆ ರವಾನಿಸಿ, ಸದರಿ ರಾಷ್ಟ್ರೀಯ ಸಮ್ಮೇಳನದಲ್ಲಿ ವಿದ್ಯಾರ್ಥಿಗಳು **ತಮ್ಮ ಕಾಲೇಜುಗಳ ಪ್ರಾಂಶುಪಾಲರ/ಉಪನ್ಯಾಸಕರ ಮಾರ್ಗದರ್ಶನ, ನೇತೃತ್ವದಲ್ಲಿ ಹಾಗೂ ಅವರ ಅಭಿರಕ್ಷೆಯಲ್ಲಿ ಜವಾಬ್ದಾರಿಯೊಂದಿಗೆ ಭಾಗವಹಿಸಿ, ಸಮ್ಮೇಳನದ ಪ್ರಯೋಜನವನ್ನು ಪಡೆಯುವ ಬಗ್ಗೆ ತಿಳಿಸಲು ಸೂಚಿಸಿದೆ.**

(ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ)

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳನ್ನು:

1. Dr. S. Rajendra Prasad, Vice-Chancellor & Chaiman, 107th Indian Science Congress (ISC), Gandhi Krishi Vignana Kendra, Bengaluru-560 065 - ಇವರ ಮಾಹಿತಿಗಾಗಿ
2. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಮಾನ್ಯ ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ
4. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು-ಇವರಿಗೆ ರಾಜ್ಯದ ಎಲ್ಲಾ 32 ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರುಗಳಿಗೆ ಇ-ಮೇಲ್ ಮೂಲಕ ರವಾನಿಸಲು.
5. ಕಚೇರಿ ಪ್ರತಿ.